## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀಮತಿ ಸೌಮ್ಯ, ಅಧ್ಯಕ್ಷರು, ಕಳಲುಘಟ್ಟ ಗ್ರಾಮ ಪಂಚಾಯಿತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯಿತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಪತ್ರದ ಸಂಖ್ಯೆ: ಬೆಂಗ್ರಾಜಿಪಂ/ಪಶಾ/ಸಿಆರ್/41/ನೆ/2016-17 ದಿನಾಂಕ:05-02-2018.
2) ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯತ್,ತುಮಕೂರು ಇವರ ತನಿಖಾ ವರದಿ ಪತ್ರದ ಸಂಖ್ಯೆ:ತುಜಿಪ/ಅಭಿ/ವಿವ-03/ಕಳಲುಘಟ್ಟ ಗ್ರಾ.ಪಂ.ತನಿಖೆ/2017-18 ದಿನಾಂಕ:27.07.2017.
3) ಕಾರಣ ಕೇಳುವ ನೋಟಿಸ್ ಸಂಖ್ಯೆ:ಗ್ರಾಅಪ 85 ಗ್ರಾಪಂಅ 2017 ದಿನಾಂಕ: 08.03.2018.
4) ಶ್ರೀಮತಿ ಸೌಮ್ಯ, ಅಧ್ಯಕ್ಷರು, ಕಳಲುಘಟ್ಟ ಗ್ರಾಮ ಪಂಚಾಯಿತಿ, ನೆಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ಕಾರಣ ಕೇಳಿ ನೋಟೀಸಿಗೆ ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ: 04.04.2018.
5) ಇದೇ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರದ ದಿನಾಂಕ:24.09.2018.

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ರವರು ನೆಲಮಂಗಲ ತಾಲ್ಲೂಕಿನ ಕಳಲುಘಟ್ಟ ಗ್ರಾಮ ಪಂಚಾಯಿತಿಯಲ್ಲಿ ನಕಲಿ ನಮೂನೆ-9 ಮತ್ತು 11ನ್ನು ವಿತರಿಸಿ, ಕೋಟ್ಯಾಂತರ ರೂಪಾಯಿ ದುರುಪಯೋಗವಾಗಿರುವ ಕುರಿತಂತೆ ಉಲ್ಲೇಖ (2) ರಲ್ಲಿ ಉಪ ಕಾರ್ಯದರ್ಶಿ(ಅಭಿವೃದ್ಧಿ), ಜಿಲ್ಲಾ ಪಂಚಾಯತ್, ತುಮಕೂರು ಇವರು ತನಿಖೆ ನಡೆಸಿ ಸದರಿ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಸೌಮ್ಯ ಅವರು ದುರ್ನಡತೆ ಎಸಗಿರುವ ಬಗ್ಗೆ ಈ ಕೆಳಕಂಡಂತೆ ವರದಿ ಸಲ್ಲಿಸಿರುತ್ತಾರೆ.

ಕಳಲುಘಟ್ಟ ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸಿರುವ ಜನರಲ್ ಲೈಸನ್ಸ್ ಪುಸ್ತಕ, ಮನೆ ಕಟ್ಟಡದ ಅನುಮತಿ ಪತ್ರ ಹಾಗೂ ಆಕ್ಷೇಪಣಾ ರಹಿತ ದೃಢೀಕರಣ ಪತ್ರಗಳ ಪುಸ್ತಕಗಳನ್ನು ಪರಿಶೀಲಿಸಿದಾಗ ದಿನಾಂಕ: 28.04.2010 ರಿಂದ ಈವರೆಗೆ ಎರಡು ಜನರಲ್ ಲೈಸನ್ಸ್ ಪುಸ್ತಕಗಳನ್ನು ನಿರ್ವಹಿಸಲಾಗಿದ್ದು ಅವುಗಳಲ್ಲಿ ದೂರಿನೊಂದಿಗೆ ಲಗತ್ತಿಸಿರುವ ಜೆರಾಕ್ಸ್ ಪ್ರತಿಗಳನ್ನು ತಾಳೆ ಮಾಡಲಾಗಿದ್ದು, ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸಲಾದ ಜನರಲ್ ಲೈಸನ್ಸ್ ರಿಜಿಸ್ಟರ್‌ನಲ್ಲಿನ ಹಾಳೆಗಳು ಕ್ರಮ ಸಂಖ್ಯೆಗಳನ್ನು ಹೊಂದಿರುತ್ತವೆ. ದೂರಿನಲ್ಲಿ ಉಲ್ಲೇಖಿಸಿರುವ ಕೆಳಕಂಡ ಗ್ರಾಮಗಳಲ್ಲಿನ ಗೋಡೌನ್ ನಿರ್ಮಾಣ ಮತ್ತು ರೆವೆನ್ಯೂ ನಿವೇಶನಗಳ ಮಾರಾಟಕ್ಕೆ ಗ್ರಾಮ ಪಂಚಾಯತ್‌ನಿಂದ ಜನರಲ್ ಲೈಸನ್ಸ್ ಆಗಲಿ, ಕಟ್ಟಡ ಅನುಮತಿ ಪತ್ರವಾಗಲಿ ವಿತರಿಸಿರುವುದು ಕಂಡುಬಂದಿಲ್ಲ. ಗ್ರಾಮ ಪಂಚಾಯಿತಿ ಸಭಾ ನಡವಳಿಗಳ ಪುಸ್ತಕವನ್ನು ಪರಿಶೀಲಿಸಿದಾಗ ಕೆಳಕಂಡ ಸ್ವತ್ತುಗಳಿಗೆ ಲೈಸನ್ಸ್ ನೀಡಲು ಸಭೆಯಲ್ಲಿ ಕೈಗೊಂಡ ನಿರ್ಣಯ ದಾಖಲಾಗಿರುವುದಿಲ್ಲ.

1) ಮಿಣ್ಣಾಪುರ ಗ್ರಾಮದ ಸ.ನಂ.31, 31/1 ಮತ್ತು 29/6ಎ ರಲ್ಲಿ ಗೋಡೌನ್ ನಿರ್ಮಿಸಿರುವ ಬಗ್ಗೆ.
2) ಮಿಣ್ಣಾಪುರ ಗ್ರಾಮದ ಸ.ನಂ. 70/1, 70/2 ಮತ್ತು 70/3 ರಲ್ಲಿ 4-ಎಕರೆ ಜಮೀನಿನಲ್ಲಿ ಭೂ ಪರಿವರ್ತನೆಯಾಗದೆ ಗೋಡೌನ್ ನಿರ್ಮಿಸಲು ಅನುಮತಿ ನೀಡಿರುವ ಬಗ್ಗೆ.
3) ಬಿದಲೂರು ಗ್ರಾಮದ ಸ.ನಂ.83/2, 84/2, 84/3, 84/4, 84/5, 84/6 ಮತ್ತು 84/7 ರಲ್ಲಿ 9-ಎಕರೆ ಜಮೀನಿನಲ್ಲಿ ಗೋಡೌನ್ ನಿರ್ಮಾಣಕ್ಕೆ ಅನುಮತಿ ನೀಡಿರುವ ಬಗ್ಗೆ.

ಆದಾಗ್ಯೂ ಮಿಣ್ಣಾಪುರ ಗ್ರಾಮದ ಸ.ನಂ 31 ರಲ್ಲಿನ ಆಸ್ತಿಗೆ ಸಂಬಂಧಿಸಿದಂತೆ ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ ಖಾತಾ ಸಂಖ್ಯೆ:192/30/5 ಎಂದು ನಮೂದಿಸಿ ಶ್ರೀ ವಿನಯ್‌ಕುಮಾರ್ ಕೆ.ಆರ್ ಬಿನ್ ಕೆ.ಬಿ. ರಾಮಕೃಷ್ಣ ರವರ ಹೆಸರಿಗೆ ರೂ. 2,00,000/- (ರಸೀದಿ ಸಂ: 541151 ದಿ: 01.02.2017 ಕಟ್ಟಡ, ಭೂಮಿ ಮೇಲಿನ ತೆರಿಗೆ ಮತ್ತು ಇತರೆ) ತೆರಿಗೆ ವಿಧಿಸಿ ರಸೀದಿ ಹಾಕಿರುವುದು ಕಂಡುಬಂದಿದೆ.

ಬಿದಲೂರು ಗ್ರಾಮದ ಸ.ನಂ 84/4, 84/5 ರಲ್ಲಿನ ಆಸ್ತಿಗೆ ಸಂಬಂಧಿಸಿದಂತೆ ಖಾತಾ ಸಂಖ್ಯೆ 247 ಎಂದು ನಮೂದಿಸಿ ಶ್ರೀಮತಿ ಮಂಗಲಾ ಬೆನ್ ಕೋಂ ಹರಾಕ್‌ಚೆಂದ್ ಎನ್ ಕರೆನೀಯ ರವರ ಹೆಸರಿಗೆ ರೂ. 5000/- (ರಸೀದಿ ಸಂ: 540909 ದಿ: 17.02.2016) ರಲ್ಲಿ ತೆರಿಗೆ ಹಾಕಲಾಗಿದೆ.

ಗ್ರಾಮ ಪಂಚಾಯತ್ ದಾಖಲೆಗಳನ್ನು ಪರಿಶೀಲಿಸಿದ ಸಮಯದಲ್ಲಿ ಮೇಲ್ಕಂಡ ಎರಡು ಸ್ವತ್ತುಗಳನ್ನು ಹೊರತುಪಡಿಸಿ ಇತರೆ ಯಾವುದೇ ಸ್ವತ್ತುಗಳಿಗೆ ಗ್ರಾಮ ಪಂಚಾಯತ್‌ನಿಂದ ಅಧಿಕೃತವಾಗಿ ಜನರಲ್ ಲೈಸೆನ್ಸ್ ಮತ್ತು ಅನುಮತಿ ಪತ್ರಗಳು ಹಿಂದಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಹಿಂದಿನ ಕಾರ್ಯದರ್ಶಿಗಳು ಹಾಗೂ ಹಾಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹೇಳಿಕೆ ನೀಡಿರುವಂತೆ ನಕಲಿ ಸಹಿ ಮತ್ತು ಮೊಹರಿನೊಂದಿಗೆ ವಿತರಿಸಿರುವುದಾಗಿ ಹೇಳಿಕೆ ನೀಡಿರುತ್ತಾರೆ. ಅಲ್ಲದೇ ದೂರು ಅರ್ಜಿಯಲ್ಲಿನ ಸ್ವತ್ತುಗಳಿಗೆ ಲೈಸೆನ್ಸ್ ನೀಡಿಲ್ಲವೆಂದೂ, ತೆರಿಗೆ ಡಿಮ್ಯಾಂಡ್ ರಿಜಿಸ್ಟರ್‌ಗಳಲ್ಲಿ ದಾಖಲಿಸಿಲ್ಲವೆಂದೂ ತಿಳಿಸಿರುತ್ತಾರೆ ಹಾಗೂ ಸಹಿಯೂ ಕೂಡ ನಮ್ಮದಲ್ಲವೆಂದು ಹೇಳಿಕೆ ಸಲ್ಲಿಸಿರುತ್ತಾರೆ.

ಕಳಲುಘಟ್ಟ ಗ್ರಾಮ ಪಂಚಾಯಿತಿಯ 2016-17ನೇ ಸಾಲಿನ ಡಿಮ್ಯಾಂಡ್ ರಿಜಿಸ್ಟರ್‌ನ್ನು ಬರೆದಿರುವುದಿಲ್ಲ ಹಾಗೂ 2015-16 ನೇ ಸಾಲಿನ ಡಿಮ್ಯಾಂಡ್ ರಿಜಿಸ್ಟರ್‌ನಲ್ಲಿ 2016-17ನೇ ಸಾಲಿನ ಬೇಡಿಕೆಯನ್ನು ನಮೂದಿಸಲಾಗಿದೆ.

ಕಳಲುಘಟ್ಟ ಗ್ರಾಮ ಪಂಚಾಯಿತಿಯ ತನಿಖೆ ಸಮಯದಲ್ಲಿ ಲಭ್ಯವಿರುವ ದಾಖಲೆಗಳ ಪರಿಶೀಲನೆಯಿಂದ, ಈ ಪ್ರಕರಣಕ್ಕೆ ಸಂಬಂಧಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು ನೀಡಿರುವ ಹೇಳಿಕೆ ಅನುಸಾರ ದೂರು ಅರ್ಜಿಯೊಂದಿಗೆ ಲಗತ್ತಿಸಿರುವ ದಾಖಲೆಗಳು, ಜನರಲ್ ಲೈಸೆನ್ಸ್, ಕಟ್ಟಡದ ಅನುಮತಿ ಪತ್ರ, ಆಕ್ಷೇಪಣಾ ರಹಿತ ದೃಢೀಕರಣ ಪತ್ರ ಮತ್ತು ತೆರಿಗೆ ನಿರ್ಧರಣಾ ಪಟ್ಟಿ (ನಮೂನೆ-9) ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸಲಾದ ಮೂಲ ದಾಖಲೆಗಳಲ್ಲಿ ಇಲ್ಲದಿರುವುದರಿಂದ ನಕಲಿ ದಾಖಲಾತಿಗಳೆಂಬ ಅಂಶ ಕಂಡು ಬಂದಿರುತ್ತದೆ ಎಂದು ವರದಿ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ಹಾಗೂ ಅಧ್ಯಕ್ಷ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಸದರಿ ಆಪಾದಿತ ಅಧ್ಯಕ್ಷರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (4) ರಲ್ಲಿ ಶ್ರೀಮತಿ ಸೌಮ್ಯ, ಅಧ್ಯಕ್ಷರು, ಕಳಲುಘಟ್ಟ ಗ್ರಾಮ ಪಂಚಾಯಿತಿ ರವರು ಸರ್ಕಾರದಿಂದ ಜಾರಿಗೊಳಿಸಲಾಗಿದ್ದ ಕಾರಣ ಕೇಳಿ ನೋಟೀಸಿಗೆ ಕೆಳಗಿನಂತೆ ಉತ್ತರವನ್ನು ಸಲ್ಲಿಸಿರುತ್ತಾರೆ.

"ಗ್ರಾಮ ಪಂಚಾಯಿತಿ ಅಧ್ಯಕ್ಷಳಾಗಿ ಪ್ರಕರಣ 58ರಡಿ ನಿರ್ದಿಷ್ಟಪಡಿಸಿರುವ ಕರ್ತವ್ಯಗಳನ್ನು ನಿರ್ವಹಿಸಿರುತ್ತೇನೆ. ದೂರಿನಲ್ಲಿ ತಿಳಿಸಿರುವ ಅಂಶಗಳು ಸಂಪೂರ್ಣವಾಗಿ ಗ್ರಾಮ ಪಂಚಾಯಿತಿಯ ಕಾರ್ಯ ನಿರ್ವಹಣೆಗೆ ಸಂಬಂಧಿಸಿರುತ್ತದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯ ಆಸ್ತಿಗೆ ಸಂಬಂಧಿಸಿದಂತೆ ತೆರಿಗೆ ನಿರ್ಧರಣೆ ಹಾಗೂ ಸಂಬಂಧಿಸಿದ ನಮೂನೆಗಳನ್ನು ಇ-ಸ್ವತ್ತು ತಂತ್ರಾಂಶದಲ್ಲಿ ನಿರ್ವಹಿಸಲು ಸರ್ಕಾರ ಹಲವಾರು ಸುತ್ತೋಲೆಗಳನ್ನು ಹಾಗೂ ಆದೇಶಗಳನ್ನು ನೀಡಿರುತ್ತದೆ. ಈ ಪ್ರಕಾರ್ಯಗಳನ್ನು ಮತ್ತು ಪ್ರಕ್ರಿಯೆಗಳನ್ನು ನಿರ್ವಹಿಸುವುದು ಕಛೇರಿ ಅಧಿಕಾರಿ ಮತ್ತು ನೌಕರರ ಜವಾಬ್ದಾರಿಯಾಗಿರುತ್ತದೆ. ಸರ್ಕಾರವು ಸಹ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯದರ್ಶಿಗಳು ನಿರ್ವಹಿಸಬೇಕಾದ ಜವಾಬ್ದಾರಿಯ ಬಗ್ಗೆ ಆದೇಶಗಳನ್ನು ಹೊರಡಿಸಿರುತ್ತದೆ.

ತನಿಖಾ ವರದಿಯಲ್ಲಿ ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶ್ರೀ ಸಿದ್ದರಾಜು, ಶ್ರೀಜೈಪಾಲ್, ಹಿಂದಿನ ಕಾರ್ಯದರ್ಶಿಯಾದ ಶ್ರೀಮತಿ ಸೌಭಾಗ್ಯಮ್ಮ, ಕರವಸೂಲಿಗಾರರು ನೀಡಿರುವ ಹೇಳಿಕೆಯಲ್ಲಿ ದೂರಿಗೆ ಸಂಬಂಧಿಸಿದ ಜಮೀನುಗಳಲ್ಲಿ ನಿರ್ಮಿಸಿರುವ ಗೋದಾಮುಗಳಿಗೆ ವಿತರಿಸಿರುವ ನಮೂನೆ-9 ಹಾಗೂ ಇನ್ನಿತರೆ ದಾಖಲೆಗಳನ್ನು ಗ್ರಾಮ ಪಂಚಾಯಿತಿಯಲ್ಲಿ ನಿರ್ವಹಿಸಿರುವುದಿಲ್ಲ ಹಾಗೂ ಸ್ವತ್ತಿನ ಬಗ್ಗೆ ದಾಖಲೆಗಳು ಇರುವುದಿಲ್ಲವೆಂದು ತಿಳಿಸಿರುವುದನ್ನು ಗಮನಿಸಬಹುದಾಗಿದೆ. ಇವುಗಳು ನಕಲಿ ದಾಖಲೆಗಳೆಂದು ಈ ಎಲ್ಲಾ ಅಧಿಕಾರಿ ಮತ್ತು ನೌಕರರು ಹೇಳಿಕೆ ನೀಡಿರುತ್ತಾರೆ. ದಾಖಲೆಗಳನ್ನು ನಿರ್ವಹಿಸುವ ಜವಾಬ್ದಾರಿ ಕಛೇರಿಯ ಅಧಿಕಾರಿ ಮತ್ತು ನೌಕರರ ಕರ್ತವ್ಯಗಳಾಗಿರುತ್ತದೆ, ದೂರಿನಲ್ಲಿ ಆಪಾದಿಸಿರುವಂತೆ ಅಧ್ಯಕ್ಷಳಾಗಿ ನಾನು ಯಾವುದೇ ಪ್ರಪತ್ರಗಳನ್ನು ವಿತರಿಸಿರುವುದಿಲ್ಲ. ಹಾಗೂ ತನಿಖಾ ವರದಿಯಲ್ಲಿಯೂ ಸಹ ನನ್ನ ವಿರುದ್ಧ ಯಾವುದೇ ಆಪಾದನೆಗಳನ್ನು ಗುರುತಿಸಿರುವುದಿಲ್ಲ. ಗ್ರಾಮ ಪಂಚಾಯಿತಿಯಲ್ಲಿ ಯಾವುದೇ ಅಧಿಕಾರ ದುರುಪಯೋಗ ಮಾಡಿಕೊಂಡಿರುವುದಿಲ್ಲವೆಂದು ತಿಳಿಸಿರುತ್ತಾರೆ."

ಮೇಲೆ ಓದಲಾದ (5) ರನ್ವಯ ದಿನಾಂಕ: 06.10.2018 ರಂದು ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ನ್ಯಾಯಾಲಯದಲ್ಲಿ ಮೌಖಿಕ ವಿಚಾರಣೆ ಜರುಗಿಸಲಾಗಿದೆ. ಆಪಾದಿತ ಕಳಲುಘಟ್ಟ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಶ್ರೀಮತಿ ಸೌಮ್ಯ, ಹಾಲಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಎಸ್.ರಾಮಕೃಷ್ಣಯ್ಯ, ಹಿಂದಿನ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಾದ ಶ್ರೀ ಜಯಪಾಲ್,(ದಿ:27.04.2010 ರಿಂದ 07.09.2015), ಶೀಮತಿ ಸೌಭಾಗ್ಯಮ್ಮ, ಕಾರ್ಯದರ್ಶಿ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ(ದಿ:08.09.2015 ರಿಂದ 04.10.2015), ಶ್ರೀ ಸಿದ್ದರಾಜು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ(ದಿ:02.102.2015 ರಿಂದ 08.09.2017), ಜಿಲ್ಲಾ ಪಂಚಾಯ್ತಿಯ ಸಹಾಯಕ ಕಾರ್ಯದರ್ಶಿಯಾದ ಶ್ರೀ ಮುನಿಕೃಷ್ಣಪ್ಪ ಮತ್ತು ಜಿಲ್ಲಾ ಪಂಚಾಯಿತಿಯ ಪ್ರಥಮ ದರ್ಜೆ ಸಹಾಯಕರಾದ ಶ್ರೀ ಎಸ್.ಜೀವರತ್ನಂ, ವಿಚಾರಣೆಗೆ ಹಾಜರಾಗಿರುತ್ತಾರೆ. ಎಲ್ಲರ ಅಹವಾಲನ್ನು ಕೇಳಲಾಗಿ, ಸರ್ಕಾರವು ಸದರಿ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯವರ ವರದಿ, ಶ್ರೀ ಕರಿಯಪ್ಪ, ಉಪ ಕಾರ್ಯದರ್ಶಿ, ಜಿಲ್ಲಾ ಪಂಚಾಯಿತಿ, ತುಮಕೂರು ಜಿಲ್ಲೆ ಇವರ ತನಿಖಾ ವರದಿ, ಶ್ರೀಮತಿ. ಸೌಮ್ಯ, ಅಧ್ಯಕ್ಷರು, ಕಳಲುಘಟ್ಟ ಗ್ರಾಮ ಪಂಚಾಯಿತಿ ರವರು ನೀಡಿರುವ ಲಿಖಿತ ಹೇಳಿಕೆ ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಲಾಗಿ, ಕಳಲುಘಟ್ಟ ಗ್ರಾಮ ಪಂಚಾಯಿತಿಯಲ್ಲಿ ನಕಲಿ ದಾಖಲಾತಿಗಳನ್ನು ವಿತರಿಸಿರುವ ಬಗ್ಗೆ ಯಾವುದೇ ದೂರನ್ನು ಆರಕ್ಷಕ ಠಾಣೆಯಲ್ಲಿ ದಾಖಲಿಸಿರುವುದಾಗಲೀ ಹಾಗೂ ಗೋಡೌನ್ ಕಟ್ಟಡಗಳ ತೆರವಿಗೆ ಯಾವುದೇ ಕ್ರಮ ಕೈಗೊಂಡಿರುವುದು ಕಂಡು ಬಂದಿರುವುದಿಲ್ಲ. ಹಾಗೂ ನಕಲಿ ಸಹಿಯೊಂದಿಗೆ ವಿತರಿಸಿರುವ ದಾಖಲಾತಿಗಳಲ್ಲಿರುವ ಸಹಿ ನಮ್ಮದಲ್ಲವೆಂದು ಗ್ರಾಮ ಪಂಚಾಯಿತಿ ಅಧ್ಯಕ್ಷರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಕಾರ್ಯದರ್ಶಿಯವರು ಹೇಳಿಕೆ ನೀಡಿರುತ್ತಾರೆ. ಸದರಿ ವಿಷಯದ ಬಗ್ಗೆ ಅಧ್ಯಕ್ಷರಾಗಲೀ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯವರಾಗಲೀ ಹಾಗೂ ಕಾರ್ಯದರ್ಶಿಯಾಗಲೀ ಆರಕ್ಷಕ ಠಾಣೆಯಲ್ಲಿ ಯಾವುದೇ ದೂರನ್ನು ದಾಖಲಿಸದಿರುವುದು ಕಂಡುಬಂದಿದ್ದು,

ಸರ್ಕಾರವು ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಮನದಟ್ಟುಮಾಡಿಕೊಂಡು ಶ್ರೀಮತಿ. ಸೌಮ್ಯ, ಅಧ್ಯಕ್ಷರು, ಕಳಲುಘಟ್ಟ ಗ್ರಾಮ ಪಂಚಾಯಿತಿ ರವರು ಕಳಲುಘಟ್ಟ ಗ್ರಾಮ ಪಂಚಾಯಿತಿಯಲ್ಲಿ ನಕಲಿ ನಮೂನೆ-9 ಮತ್ತು 11 ನ್ನು ವಿತರಿಸಿ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ವಂಚಿಸಿರುವ ಬಗ್ಗೆ ಹೆಚ್ಚಿನ ತನಿಖೆಗಾಗಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ವಹಿಸುವುದು ಸೂಕ್ತವೆಂದು ನಿರ್ಧರಿಸಿದೆ.
ಅದರಂತೆ ಈ ಆದೇಶ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 85 ಗ್ರಾಪಂಅ 2017, ಬೆಂಗಳೂರು, ದಿನಾಂಕ: 01-12-2018</u>

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಸೌಮ್ಯ, ಅಧ್ಯಕ್ಷರು, ಕಳಲುಘಟ್ಟ ಗ್ರಾಮ ಪಂಚಾಯಿತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಕಳಲುಘಟ್ಟ ಗ್ರಾಮ ಪಂಚಾಯಿತಿಯಲ್ಲಿ ನಕಲಿ ನಮೂನೆ 9 ಮತ್ತು 11 ನ್ನು ವಿತರಿಸಿ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ವಂಚಿಸಿರುವ ಬಗ್ಗೆ ಹೆಚ್ಚಿನ ತನಿಖೆಗಾಗಿ ಕರ್ನಾಟಕ ಲೋಕಾಯುಕ್ತ ಕಾಯ್ದೆ ಪ್ರಕರಣ 7ರ ಅಡಿಯಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

1/12

(ಮುಬಾರಕ್ ಅಹ್ಮದ್),
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
2) ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿ, ಬೆಂಗಳೂರು.
4) ಕಾರ್ಯನಿರ್ವಾಹಕಾಧಿಕಾರಿ, ನೆಲಮಂಗಲ ತಾಲ್ಲೂಕು ಪಂಚಾಯಿತಿ, ನೆಲಮಂಗಲ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5) ಶ್ರೀಮತಿ ಸೌಮ್ಯ, ಅಧ್ಯಕ್ಷರು, ಕಳಲುಘಟ್ಟ ಗ್ರಾಮ ಪಂಚಾಯಿತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
6) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಕಳಲುಘಟ್ಟ ಗ್ರಾಮ ಪಂಚಾಯಿತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3) ನಿರ್ದೇಶಕರು(ಪಂ.ರಾಜ್-1), ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.